# ಸಲಾಪುರಿಯಾ ಸತ್ವ ಗ್ರೂಪ್‌ನಿಂದ ಕಾರ್ಪೊರೇಟ್ ವ್ಯಾಕ್ಸಿನೇಷನ್

**ಬೆಂಗಳೂರು, ಜೂ.7-** ಭಾರತದ ಪ್ರಮುಖ ಪ್ರಾಪರ್ಟಿ ಡೆವಲಪ್ ಮೆಂಟ್, ನಿರ್ವಹಣೆ ಮತ್ತು ಸಲಹಾ ಸಂಸ್ಥೆಯಾದ ಸಲಾಪುರಿಯ ಸತ್ವ ಗ್ರೂಪ್ ಸಾಂಕ್ರಾಮಿಕ ರೋಗದ ಸಮಯದಲ್ಲಿ ಅಗತ್ಯವಿರುವವರಿಗೆ ಸಹಾಯ ಮಾಡಲು ಯಾವಾಗಲೂ ಮುಂಚೂಣಿಯಲ್ಲಿದೆ.

ಕೋವಿಡ್ ಎರಡನೇ ಅಲೆಯ ಸಮಯದಲ್ಲಿ ಸಲಾಪುರಿಯ ಸತ್ವ ತನ್ನ ಎಲ್ಲಾ ಉದ್ಯೋಗಿಗಳ ಆರೋಗ್ಯವನ್ನು ರಕ್ಷಿಸುವ ಜೊತೆಗೆ ತನ್ನ ಗ್ರಾಹಕರು ಹಾಗೂ ಸಾಮಾನ್ಯ ಸಾರ್ವಜನಿಕರಿಗೆ ಸಮಯೋಚಿತ ಸಹಾಯ ಮಾಡುತ್ತಿದೆ.

ಎರಡನೇ ಅಲೆಯನ್ನು ಎದುರಿಸಲು ಬೆಂಗಳೂರಿನ ತನ್ನ ಕಾರ್ಪೊರೇಟ್ ಕಚೇರಿಯಲ್ಲಿ



ಎಲ್ಲಾ ಉದ್ಯೋಗಿಗಳಿಗೆ ಉಚಿತವಾಗಿ ಕಾರ್ಪೊರೇಟ್ ಕೋವಿಡ್ ವ್ಯಾಕ್ಸಿನೇಷನ್ ಶಿಬಿರವನ್ನು ನಡೆಸಿತು. ಅಲ್ಲದೆ ಕಂಪನಿಯು, ಆಮ್ಲಜನಕ ಸಾಂದ್ರಕ ಸೌಲಭ್ಯ ಪಡೆಯಲು, ಆಸ್ಪತ್ರೆಗೆ ದಾಖಲಾಗಲು, ವೈದ್ಯರೊಂದಿಗೆ ಸಮಾಲೋಚನೆ ಸೇರಿದಂತೆ ಹಲವು ಸಮಯೋಚಿತ ರೀತಿಯಲ್ಲಿ ಎರಡನೇ ಅಲೆಯ ವೇಳೆ ಉದ್ಯೋಗಿಗಳು ಮತ್ತು ಅವರ ಕುಟುಂಬ ಸದಸ್ಯರಿಗೆ ಸಹಾಯ ಮಾಡಲು ತನ್ನದೇ ಆದ ಕ್ವಾರಂಟೈನ್ ಸೌಲಭ್ಯವನ್ನು ಸಹ ಹೊಂದಿದೆ. ಸಲಾಪುರಿಯ ಸತ್ವದ ಎಂಡಿ ಬಿಜಯ್ ಅಗರ್ವಾಲ್ ಮಾತನಾಡಿ, ನಮ್ಮ ಉದ್ಯೋಗಿಗಳ ಸುರಕ್ಷತೆ ನಮ್ಮ ಮೊದಲ ಆದ್ಯತೆಯಾಗಿದೆ. ವಿಕಸನಗೊಳ್ಳುತ್ತಿರುವ ಸಾಂಕ್ರಾಮಿಕ ಪರಿಸ್ಥಿತಿಗೆ ಪ್ರತಿಕ್ರಿಯೆಯಾಗಿ, ನಾವು ನಮ್ಮ ಉದ್ಯೋಗಿಗಳ ಆರೋಗ್ಯ ಮತ್ತು ಯೋಗಕ್ಷೇಮಕ್ಕಾಗಿ ನಮ್ಮ ಪ್ರಯತ್ನಗಳನ್ನು ಮರುಹೊಂದಾಣಿಕೆ ಮಾಡಿದ್ದೇವೆ. ಪ್ರತಿ ಹಂತದಲ್ಲೂ ನಮ್ಮ ಉದ್ಯೋಗಿಗಳಿಗೆ ಉತ್ತಮ ಬೆಂಬಲವನ್ನು ಪಡೆಯಲು ಸಹಾಯ ಮಾಡುವ ನಿಟ್ಟಿನಲ್ಲಿ ಲಸಿಕೆ ಅಂತಹ ಒಂದು ಪ್ರಮುಖ ಹೆಜ್ಜೆಯಾಗಿದೆ ಎಂದರು.